**ದಿನಾಂಕ 27.04.2026 ರಂದು ಸಾಕ್ಷಿ ಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

ಅಧಿಕಾರ ಪತ್ರವನ್ನು **ನಿಪಿ 16** ಎಂದು, ಎಂ.ಎಲ್.ಸಿ ರಿಜಿಸ್ಟರ್ ಎಕ್ಸ್ ಟ್ರ್ಯಾ ಕ್ಟ್ ಮತ್ತು ಪೊಲೀಸ್ ಇಂಟಿಮೇಷನ್ ನ ಧೃಡಿಕೃತ ಪ್ರತಿ( ಮೂಲ ವಹಿಯೊಂದಿಗೆ ಹೋಲಿಕೆ ಮಾಡಿ ಮೂಲ ವಹಿಯನ್ನು ಸಾಕ್ಷಿಗೆ ಹಿಂದಿರುಗಿಸಲಾಯಿತು) ಗಳನ್ನು ಕ್ರಮವಾಗಿ **ನಿಪಿ 17 ಮತ್ತು 18** ಎಂದು, ಕೇಸ್ ಶೀಟ್ ಗಳನ್ನು **ನಿಪಿ 19** ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ 1ನೇ ಎದುರುದಾರರ ಪರ ಮಾನ್ಯ ವಕೀಲರಿಂದ.**

ನಿಪಿ 17 ರಲ್ಲಿ ಇರುವ ಹೆಬ್ಬೆಟ್ಟಿನ ಗುರುತು ಯಾರದ್ದು ಎಂದು ನಮೂದು ಇಲ್ಲ ಎಂದರೆ ಸರಿ. ನಿಪಿ 17 ಅನ್ನು ಸೃಷ್ಟಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಅರ್ಜಿದಾರರು ನಮ್ಮ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿಲ್ಲ ಮತ್ತು ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

2ನೇ ಎದುರುದಾರರ ಪರ ಮಾನ್ಯ ವಕೀಲರು ಗೈರು ಹಾಜರಾದ ಕಾರಣ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**